ತಾಲ್ಲೂಕು ವಲಯ	ಸಹ ಶಿಕ್ಷಕರು ಕನ್ನಡ	ಉರ್ದು	ಮರಾಠಿ	ದೈಹಿಕಶಿಕ್ಷಕರು	ಹಿಂದಿ
1. ಅಥಣಿ	65	-	59	-	03
2. ಬೆಳಗಾವಿ ಶಹರ	06	17	00	-	-
3. ಬೆಳಗಾವಿ ತಾಲ್ಲೂಕಲು	10	-	02	01	-
4. ಬೈಲಹೊಂಗಲ	06	-	-	-	-
5. ನಿಪ್ಪಾಣಿ	16	-	13	01	03
6. ಚಿಕ್ಕೋಡಿ	24	-	24	-	-
7. ಗೋಕಾಕ	16	-	16	-	03
8. ಹುಕ್ಕೇರಿ	20	-	20	-	03
9. ಖಾನಾಪೂರ	16	-	83	-	02
10. ರಾಯಭಾಗ	19	-	05	-	05
11. ರಾಮದುರ್ಗ	07	-	-	01	03
12. ಸವದತ್ತಿ	05	-	-	-	03

ತರೀಕೆರೆ ಪಟ್ಟಣದಲ್ಲಿರುವ ಮಹಿಳಾ ಪದವಿ ಪೂರ್ವ ಕಾಲೇಜು ಕಟ್ಟಡ

1540 (1767) ಶ್ರೀ ಬಿ.ಆರ್. ನೀಲಕಂಠಪ್ಪ (ತರೀಕೆರೆ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ತರೀಕೆರೆ ಪಟ್ಟಣದಲ್ಲಿರುವ ಮಹಿಳಾ ಪದವಿ ಪೂರ್ವ ಕಾಲೇಜು (ಪಿ.ಯು.ಸಿ) ಕಟ್ಟಡಕ್ಕಾಗಿ ಸುಮಾರು 6 ಲಕ್ಷ ರೂ.ಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಅತ್ಯಾವಶ್ಯಕವಾಗಿ ಬೇಕಾಗಿರುವ ಕಟ್ಟಡವನ್ನು ಕಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ತರೀಕೆರೆ ಪಟ್ಟಣದ ಮಹಿಳಾ ಪದವಿ ಪೂರ್ವ ಕಾಲೇಜಿಗೆ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ರೂ.6.00 ಲಕ್ಷಗಳ ಅಂದಾಜನ್ನು ಲೋಕೋಪಯೋಗಿ ಇಲಾಖೆ ಸಿದ್ಧಪಡಿಸಿರುತ್ತದೆ.

ಆ) ಪದವಿಪೂರ್ವ ಕಾಲೇಜುಗಳ ಕಟ್ಟಡಗಳ ನಿರ್ಮಾಣಕ್ಕಾಗಿ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಮೊತ್ತದಲ್ಲಿ ಆದ್ಯತೆಯ ಮೇರೆಗೆ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಲೋಕೋಪಯೋಗಿ ಇಲಾಖೆಯನ್ನು ವಿನಂತಿಸಲಾಗುವುದು.

ತರೀಕೆರೆ ತಾಲ್ಲೂಕಿನಲ್ಲಿ ಶಿಕ್ಷಣಾಧಿಕಾರಿಗಳ ಕಛೇರಿ ಕಟ್ಟಡ ಕುರಿತು

1541 (1768) ಶ್ರೀ ಬಿ.ಆರ್. ನೀಲಕಂಠಪ್ಪ (ತರೀಕೆರೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ತರೀಕೆರೆ ತಾಲ್ಲೂಕಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಇದೆಯೆ;

ಆ) ಹಾಗಿದ್ದಲ್ಲಿ ಅದು ಸ್ವಂತ ಕಟ್ಟಡ ಹೊಂದಿದೆಯೆ;

ಇ. ಹಾಗಿಲ್ಲದಿದ್ದಲ್ಲಿ ಪ್ರಸಕ್ತ ವರ್ಷ ಕಟ್ಟಡ ಕಟ್ಟುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಶಿಕ್ಷಣ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಇದೆ

ಆ) ಹೊಂದಿಲ್ಲ

ಇ) ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಟ್ಟಡ ಕಟ್ಟುವ ಪ್ರಸ್ತಾವನೆ ಸರ್ಕಾರದ ಮುಂದಿದೆ.

ತರೀಕೆರೆ ತಾಲ್ಲೂಕು ಅಜ್ಜಂಪುರದ ಪದವಿಪೂರ್ವ ಕಾಲೇಜು

1542 (1769) ಶ್ರೀ ಬಿ.ಆರ್. ನೀಲಕಂಠಪ್ಪ (ತರೀಕೆರೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತರೀಕೆರೆ ತಾಲ್ಲೂಕು ಅಜ್ಜಂಪುರದ ಪದವಿ ಪೂರ್ವ ಕಾಲೇಜಿನಲ್ಲಿ ವಿಜ್ಞಾನ ಕೋರ್ಸ್‌ನ್ನು ಈ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಸರ್ಕಾರ ಮಂಜೂರಾತಿ ನೀಡುವುದೇ?